<u>ಕರ್ನಾಟಕ ಸರ್ಕಾರದ ನಡವಳಿಗಳು</u>

ವಿಷಯ: ಅಲೆಮಾರಿ/ಅರೆಅಲೆಮಾರಿ ಸಮುದಾಯದವರು ಹೆಚ್ಚು ವಾಸಿಸುತ್ತಿರುವ ಜಿಲ್ಲೆಗಳಲ್ಲಿನ 09 ವಿದ್ಯಾರ್ಥಿನಿಲಯಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ/135/2022, ದಿನಾಂಕ:16.03.2022.
2. ಆಯುಕ್ತರ ಪ್ರಸ್ತಾವನೆ ಸಂಖ್ಯೆ: BCWD-15014/21/2022 ದಿನಾಂಕ::17.05.2022.

******

<u>ಪ್ರಸ್ತಾವನೆ:-</u>

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆದೇಶದಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗಾಗಿ 2021-22ನೇ ಸಾಲಿನಲ್ಲಿ ಅಲೆಮಾರಿ/ಅರೆ ಅಲೆಮಾರಿ ಅಭಿವೃದ್ಧಿ ಕಾರ್ಯಕ್ರಮಗಳ ಲೆಕ್ಕಶೀರ್ಷಿಕೆ:2225-03-102-0-12 ಆಬ್ಜೆಕ್ಟೀವ್ ಕೋಡ್ 059 ರಡಿಯಲ್ಲಿ ಉಳಿತಾಯವಾಗುವ ರೂ.3016.50 ಲಕ್ಷಗಳ ಅನುದಾನವನ್ನು ಅಲೆಮಾರಿ/ಅರೆಅಲೆಮಾರಿ ಸಮುದಾಯದವರು ಅತಿಹೆಚ್ಚು ವಾಸಿಸುತ್ತಿರುವ ಜಿಲ್ಲೆಗಳ 09 ವಿದ್ಯಾರ್ಥಿನಿಲಯಗಳ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಪ್ರತಿ ವಿದ್ಯಾರ್ಥಿನಿಲಯಕ್ಕೆ ರೂ.335.16 ಲಕ್ಷಗಳ ಅಂದಾಜು ವೆಚ್ಚದಲ್ಲಿ ನಿರ್ಮಿಸಲು ಷರತ್ತಿಗಳಿಗೊಳಪಟ್ಟು ಅನುಮತಿ ನೀಡಿ ಆದೇಶಿಸಲಾಗಿದೆ. ಹಾಗೂ ರೂ.3016.50 ಲಕ್ಷಗಳನ್ನು ಕರ್ನಾಟಕ ಗೃಹ ಮಂಡಳಿಗೆ ಠೇವಣಿ ಇಡಲು ಅನುಮತಿ ನೀಡಿರುತ್ತದೆ

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಆಯುಕ್ತರ ಪ್ರಸ್ತಾವನೆಯಲ್ಲಿ ಸರ್ಕಾರದ ಆದೇಶದಂತೆ 09 ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣವನ್ನು ತಲಾ ರೂ.335.16 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು ರೂ.3016.50 ಲಕ್ಷಗಳನ್ನು ಗೃಹ ಆಯುಕ್ತರು, ಕರ್ನಾಟಕ ಗೃಹ ಮಂಡಳಿ, ಬೆಂಗಳೂರು ಇವರಿಗೆ ಬಿಡುಗಡೆ ಮಾಡಲಾಗಿರುತ್ತದೆ. ಪ್ರಸ್ತುತ, ಸದರಿ 09 ಮೆಟ್ರಿಕ್ ನಂತರ ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣವನ್ನು ಕೈಗೊಳ್ಳಲು ತಲಾ ರೂ.335.16 ಲಕ್ಷಗಳ ಅಂದಾಜು ಪಟ್ಟಿ ಮತ್ತು ನಕ್ಷೆಯನ್ನು ಸಲ್ಲಿಸಿದ್ದು, ಮೇಲ್ಕಂಡ 09 ಮೆಟ್ರಿಕ್ ನಂತರ ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣವನ್ನು ಕೈಗೊಳ್ಳಲು ತಲಾ ರೂ.335.16 ಲಕ್ಷಗಳ ಅಂದಾಜು ವೆಚ್ಚಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶ ಹೊರಡಿಸುವಂತೆ ಕೋರಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 135 ಬಿಎಂಎಸ್ 2022,</u>**
**<u>ಬೆಂಗಳೂರು, ದಿನಾಂಕ: 31.05.2022</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಅಲೆಮಾರಿ/ಅರೆಅಲೆಮಾರಿ ಸಮುದಾಯದವರು ಅತಿಹೆಚ್ಚು ವಾಸಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಈ ಕೆಳಕಂಡ 09 ಜಿಲ್ಲೆಗಳ ವಿದ್ಯಾರ್ಥಿನಿಲಯಗಳ ಸ್ವಂತ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ತಲಾ ರೂ.335.16 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕರ್ನಾಟಕ ಗೃಹ ಮಂಡಳಿ ಇವರ

31/05/2022 --2

ಮುಖಾಂತರ ಕೈಗೊಳ್ಳಲು ಈ ಕೆಳಗೆ ನಮೂದಿಸಿರುವ ಷರತ್ತುಗಳಿಗೊಳಪಟ್ಟು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

| ಕ್ರ ಸಂ. | ಜಿಲ್ಲೆ | ವಿದ್ಯಾರ್ಥಿನಿಲಯದ ವಿವರ |
|---|---|---|
| 1 | ಬಳ್ಳಾರಿ | ಮೆಟ್ರಿಕ್ ನಂತರ ಇಂಜಿನಿಯರಿಂಗ್ ಮತ್ತು ಮೆಡಿಕಲ್ ಬಾಲಕಿಯರ ವಿದ್ಯಾರ್ಥಿನಿಲಯ, ಜಯನಗರ, ಬಳ್ಳಾರಿ ಟೌನ್ (ಬಿಸಿಡಬ್ಲ್ಯೂಡಿ 1664) |
| 2 | ಚಿತ್ರದುರ್ಗ | ಮೆಟ್ರಿಕ್ ನಂತರ ಇಂಜಿನಿಯರಿಂಗ್ ಮತ್ತು ಮೆಡಿಕಲ್ ಬಾಲಕಿಯರ ವಿದ್ಯಾರ್ಥಿನಿಲಯ, ಚಿತ್ರದುರ್ಗ ಟೌನ್ (ಬಿಸಿಡಬ್ಲ್ಯೂಡಿ 1825) |
| 3 | ಚಿಕ್ಕಮಗಳೂರು | ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯ (ಸಾಮಾನ್ಯ) (ವಿಭಜಿತ-01), ಚಿಕ್ಕಮಗಳೂರು ಟೌನ್ (ಬಿಸಿಡಬ್ಲ್ಯೂ 1771) |
| 4 | ದಾವಣಗೆರೆ | ಮೆಟ್ರಿಕ್ ನಂತರ ವೃತ್ತಿಪರ ಬಾಲಕಿಯರ ವಿದ್ಯಾರ್ಥಿನಿಲಯ (2), ನಿಟ್ಟುವಳ್ಳಿ ದಾವಣಗೆರೆ ಟೌನ್ (ಬಿಸಿಡಬ್ಲ್ಯೂಡಿ 1919) |
| 5 | ತುಮಕೂರು | ಮೆಟ್ರಿಕ್ ನಂತರ ಮೆಡಿಕಲ್ ಮತ್ತು ಇಂಜಿನಿಯರಿಂಗ್ ಬಾಲಕರ ವಿದ್ಯಾರ್ಥಿನಿಲಯ, ತುಮಕೂರು ಟೌನ್ (ಬಿಸಿಡಬ್ಲ್ಯೂಡಿ 2436) |
| 6 | ಕಲಬುರಗಿ | ಮೆಟ್ರಿಕ್ ನಂತರ ಇಂಜಿನಿಯರಿಂಗ್ & ಮೆಡಿಕಲ್ ಬಾಲಕರ ವಿದ್ಯಾರ್ಥಿನಿಲಯ, ಕಲಬುರಗಿ ಟೌನ್ (ಬಿಸಿಡಬ್ಲ್ಯೂಡಿ 2094) |
| 7 | ಹಾವೇರಿ | ಮೆಟ್ರಿಕ್ ನಂತರ ವೃತ್ತಿಪರ ಬಾಲಕರ ವಿದ್ಯಾರ್ಥಿನಿಲಯ, ಹಾವೇರಿ ಟೌನ್ (ಬಿಸಿಡಬ್ಲ್ಯೂಡಿ 2054) |
| 8 | ಯಾದಗಿರಿ | ಮೆಟ್ರಿಕ್ ನಂತರ ಬಾಲಕರ ವಿದ್ಯಾರ್ಥಿನಿಲಯ (ಮಾದರಿ), ಯಾದಗಿರಿ ಟೌನ್ (ಬಿಸಿಬ್ಲ್ಯೂಡಿ 2561) |
| 9 | ಬೀದರ್ | ಮೆಟ್ರಿಕ್ ನಂತರ ವೃತ್ತಿಪರ ಬಾಲಕರ ವಿದ್ಯಾರ್ಥಿನಿಲಯ, ಬೀದರ್ ಟೌನ್ (ಬಿಸಿಡಬ್ಲ್ಯೂ 1708) |

ಷರತ್ತುಗಳು:

1. ಆಯುಕ್ತರು, ಕರ್ನಾಟಕ ಗೃಹ ಮಂಡಳಿ ಇವರು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ತಾಂತ್ರಿಕ ಅನುಮತಿಯನ್ನು ಪಡೆಯತಕ್ಕದು.
2. ಅನುಮೋದನೆಯಾದ ಕಾಮಗಾರಿಗಳ ಬದಲಾವಣೆಗೆ ಅವಕಾಶವಿರುವುದಿಲ್ಲ ಹಾಗೂ ನೀಡಿರುವ ಅನುದಾನವನ್ನು ಈ ಆದೇಶದಲ್ಲಿರುವ ಅನುಮೋದಿತ ಕಾಮಗಾರಿಯನ್ನು ಹೊರತುಪಡಿಸಿ ಬೇರೆ ಯಾವ ಉದ್ದೇಶಕ್ಕೆ ಬಳಕೆ ಮಾಡಲು ಅವಕಾಶವಿರುವುದಿಲ್ಲ.
3. ಸದರಿ ಕಾಮಗಾರಿಗಳನ್ನು ಬೇರೆ ಯಾವುದೇ ಅನದಾನದಿಂದ ತೆಗೆದುಕೊಳ್ಳದೇ ಇರುವ ಬಗ್ಗೆ ಹಾಗೂ ಕಾಮಗಾರಿಗಳ ಪುನರಾವರ್ತನೆ ಆಗದಿರುವ ಬಗ್ಗೆ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಖಚಿತ ಪಡಿಸಿಕೊಳ್ಳತಕ್ಕದ್ದು.
4. ಆಯುಕ್ತರು, ಕರ್ನಾಟಕ ಗೃಹ ಮಂಡಳಿ ಇವರು ಮೇಲೆ ನಮೂದಿಸಿರುವ ವಿದ್ಯಾರ್ಥಿನಿಲಯಗಳ ಕಟ್ಟಡ ಕಾಮಗಾರಿಗಳಿಗೆ ಕೆ.ಟಿ.ಪಿ.ಪಿ ಅಧಿನಿಯಮ-1999 & ನಿಯಮ 2000 ರಂತೆ ಹಾಗೂ ಆರ್ಥಿಕ ಇಲಾಖೆ ಕಾಲಕಾಲಕ್ಕೆ ಹೊರಡಿಸಿರುವ ಸಂಬಂಧಪಟ್ಟ ಆದೇಶ, ಸುತ್ತೋಲೆಗಳಲ್ಲಿನ ಸೂಚನೆಗಳನ್ವಯ ನಿಯಮಾನುಸಾರ ಟೆಂಡರ್ ಕರೆದು ಅನುಷ್ಠಾನಗೊಳಿಸುವುದು.

31/05/2022

--3